# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ-190, ಮಂಗಮ್ಮನಪಾಳ್ಯ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

ಮಾನ್ಯ ನೋಡಲ್ ಅಧಿಕಾರಿ/ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 08.03.2021 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ರಲ್ಲಿ ನಡೆಸಿದ್ದ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಸಭೆಯಲ್ಲಿ ಹಾಜರಿದ್ದ ಸದಸ್ಯರು/ಅಧಿಕಾರಿಗಳು**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಹನುಮಂತರಾಯ ಟಿ. | ಅಧ್ಯಕರು/ ನೋಡಲ್ ಅಧಿಕಾರಿಗಳು |
| 2 | ಶ್ರೀಮತಿ ಲಕ್ಷ್ಮೀ ಬಿ | ಸ.ಕಂ.ಅ ಹೆಚ್.ಎಸ್.ಆರ್ ಉಪವಿಭಾಗ |
| 3 | ಶ್ರೀ ರಮೇಶ್ ಡಿ | ಕಿ.ಅ. ವಿದ್ಯುತ್ ವಿಭಾಗ |
| 4 | ಶ್ರೀ ಹೊನ್ನುರ ಬಾಷ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ವಿಜಯಕುಮಾರ್ | ಕಿರಿಯ ಅಭಿಯಂತರರು, ಬೆಸ್ಕಾಂ |
| 6 | ಶ್ರೀ ನಟರಾಜ್ ಬಿ.ಸಿ | ವಾಟರ್ ಇನ್ಸ್‌ಪೆಕ್ಟರ್ |
| 7 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು |
| 8 | ಶ್ರೀ ಚಂದ್ರ ರೆಡ್ಡಿ | ಸದಸ್ಯರು |
| 9 | ಶ್ರೀ ಉಮೇಶ್ ಎಸ್. | ಸದಸ್ಯರು |
| 10 | ಶ್ರೀ ಸೈಯದ್ ಸಲಾಂ | ಸದಸ್ಯರು |

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ ಟಿ ಹನುಮಂತರಾಯ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು, ಅಧ್ಯಕ್ಷರು ವಾರ್ಡ್ ಸಭೆಗೆ ಹಾಜರಾಗಿದ್ದ ಸದಸ್ಯರಿಗೆ ಮತ್ತು ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಪ್ರಸ್ತಾಪಿಸಲು ಕೋರಿದರು.

ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಿ, ಘನತ್ಯಾಜ್ಯ ನಿರ್ವಹಣೆ, ತೋಟಗಾರಿಕೆ, ವಿದ್ಯುತ್, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬೆಸ್ಕಾಂ ಹಾಗೂ ಇಂಜಿಯರಿಂಗ್ ಎಲ್ಲಾ ಇಲಾಖೆಯು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಹಾಗೂ ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಿ ಸುಧಾರಣೆ ತಂದಿರುವುದನ್ನು ಗಮನಿಸಿದ್ದು, ಇನ್ನು ಉತ್ತಮ ರೀತಿಯಲ್ಲಿ ಮುಂದುವರೆಸಲು ನೋಡಲ್ ಅಧಿಕಾರಿಯವರು ತಿಳಿಸಿದರು.

Scanned with Car

| ಕ್ರ ಸಂ | ಇಲಾಖೆ | ವಿಷಯ |
|---|---|---|
| 1 | ತೋಟಗಾರಿಕೆ ಇಲಾಖೆ. | ವಾರ್ಡ್ ವ್ಯಾಪ್ತಿಯ ಐ.ಟಿ.ಐ ಬಡಾವಣೆಯಲ್ಲಿ ಅಭಿವೃದ್ಧಿಯಾಗದ ಉದ್ಯಾನವನ್ನು ಸ್ಥಳ ಪರಿಶೀಲಿಸಿ, ನೀಲಿ ನಕ್ಷೆಯನ್ನು ತಯಾರಿಸಿ ಪ್ರಸ್ತುತ ಸಾಲಿನಲ್ಲಿ ಟೆಂಡರ್ ಕರೆದ್ದು, ಅಭಿವೃದ್ಧಿ ಪಡಿಸಲು ವಾರ್ಡ್ ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br><br>**ಕ್ರಮ ತೋಟಗಾರಿಕೆ ನಿರ್ವಹಣೆ ಪರಿವೀಕ್ಷಕರು** |
| 3 | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ಕುಡಿಯುವ ನೀರಿನ ಮೀಟರ್ ಅಳವಡಿಸಿಕೊಳ್ಳದೆ ಅನಧಿಕೃತವಾಗಿ ನೀರಿನ ಸಂಪರ್ಕವನ್ನು ಕಲ್ಪಿಸಿಕೊಂಡಿರುವ ಒಟ್ಟು 300 ಮನೆಗಳಿಗೆ ನೋಟಿಸ್ ಜಾರಿ ಮಾಡಿ, ಸಂಪರ್ಕವನ್ನು ಕಡಿತಗೊಳಿಸಲಾಗಿದೆ ಎಂದು ಸಭೆಯಲ್ಲಿ ಹಾಜರಿದ್ದ ವಾಟರ್ ಇನ್ಸ್‌ಪೆಕ್ಟರ್ ರವರು ತಿಳಿಸಿರುತ್ತಾರೆ.<br>**ಕ್ರಮ : ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ** |
| 4 | ಕಂದಾಯ ವಿಭಾಗ | ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಖಾಸಗಿ ವ್ಯಕ್ತಿಗಳಿಂದ ಅನಧಿಕೃತವಾಗಿ ಗುರುತಿನ ಚೀಟಿ ಮಾಡಿಸಲಾಗುತ್ತಿದ್ದು, ಸೂಕ್ತ ದಾಖಲೆಗಳನ್ನು ನೀಡಿರುವುದನ್ನು ಪರಿಶೀಲಿಸಿ ಗುರುತಿನ ಚೀಟಿ ಒದಗಿಸಲು ವಾರ್ಡ್ ಸದಸ್ಯರು ಸಭೆಯ ಗಮನಕ್ಕೆ ತಂದಿರುತ್ತಾರೆ. ಈ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>ವಾರ್ಡ್ ವ್ಯಾಪ್ತಿಯ ಬಂಡೇಪಾಳ್ಯ ಸರ್ವೆ ನಂ. 43,44, & 45 ರಲ್ಲಿ 2 ಎಕರೆ 18 ಗುಂಟೆ ಜಾಗವನ್ನು ಖಾಸಗಿ ವ್ಯಕ್ತಿಗಳಿಂದ ಅಕ್ರಮಿಸಿಕೊಂಡಿದ್ದು, ಎಲ್ಲಾ ಸೂಕ್ತ ದಾಖಲಾತಿಗಳನ್ನು ಪರಿಶೀಲಿಸಿ ಸರ್ವೆ ಮಾಡಿ, ಕೆ.ಎಂ.ಸಿ ಕಾಯ್ದೆ ಪ್ರಕಾರ ಕ್ರಮ ವಹಿಸುವಂತೆ ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ : ಸ.ಕ.ಅ. ಹೆಚ್.ಎಸ್.ಆರ್ ಉಪವಿಭಾಗ** |
| 5 | ವಿದ್ಯುತ್ ವಿಭಾಗ | ವಾರ್ಡ್ ವ್ಯಾಪ್ತಿಯ ಬಂಡೇಪಾಳ್ಯ ಗ್ರಾಮದ ಕೆಲವು ಬೀದಿಗಳಲ್ಲಿ ಬೀದಿ ದೀಪಗಳು ಅಳವಡಿಸಿರುವುದಿಲ್ಲ ಹಾಗೂ ಇನ್ನೂ ಕೆಲವು ಇರುವ ಬೀದಿ ದೀಪಗಳನ್ನು ದುರಸ್ಥಿ ಪಡಿಸಬೇಕಾಗಿರುತ್ತದೆ ಎಂದು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br><br>**ಕ್ರಮ : ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ** |
| 6 | ಕಾಮಗಾರಿ | ವಾರ್ಡ್ ವ್ಯಾಪ್ತಿಯ ಬಂಡೇಪಾಳ್ಯ ಸರ್ವೆ ಸಂ. 44, ಅಂಬೇಡ್ಕರ್ ನಗರ, ಬಂಡೇಪಾಳ್ಯ, ಬೇಗೂರು ಹೋಬಳಿ, ಇಲ್ಲಿ ಸಾರ್ವಜನಿಕರ ಉಪಯೋಗದ ರಸ್ತೆಯನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಸದಸ್ಯರುಗಳು ಸಭೆಯಲ್ಲಿ ತಿಳಿಸಿರುತ್ತಾರೆ.<br>• ಪಾದಚಾರಿ ಮಾರ್ಗದ ಮಳಿಗೆಗಳನ್ನು ತೆರವುಗೊಳಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ :ಸಹಾಯಕ ಅಭಿಯಂತರರು, ವಾರ್ಡ್ ನಂ. 190** |

Scanned with Car

ಈ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

Lakshmi

ಕಾರ್ಯದರ್ಶಿಗಳು
ವಾರ್ಡ್ ನಂ. 190

ಅಧ್ಯಕ್ಷರು/ ನೋಡಲ್ ಅಧಿಕಾರಿಗಳು
ವಾರ್ಡ್ ನಂ. 190

Scanned with Car